ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE: 5/1/21

ಹೊಂದಾಣಿಕೆ ರಾಜಕೀಯಕ್ಕೆ ನಮ್ಮನ್ನು ಕಡೆಗಣಿಸುತ್ತಿರುವಿರಿ ಎಂದ ಶಾಸಕರು | ಕೆಲ ಸಚಿವರು ಪ್ರತಿಪಕ್ಷಗಳೊಂದಿಗೆ ಸೇರಿಕೊಂಡು ಕೆಲಸ ಮಾಡುತ್ತಿಲ್ಲ

# ಸಿಎಂ ಬಳಿ ಅಳಲು ತೋಡಿಕೊಂಡ ಶಾಸಕರು

5/1/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಅಸಮಾಧಾನಿತ ಶಾಸಕರನ್ನು ಸಂತೈಸುವುದಕ್ಕಾಗಿಯೇ ಕರೆದಿದ್ದ ಸಭೆಯಲ್ಲಿ, ಮುಖ್ಯಮಂತ್ರಿ ಯಡಿಯೂರಪ್ಪನವರ ಸಚಿವ ಸಂಪುಟದ ಕೆಲ ಸಚಿವರ ವಿರುದ್ಧ ಶಾಸಕರು ನೇರವಾಗಿ ತಮ್ಮ ಅಸಮಾಧಾನ ಹೊರಹಾಕಿರುವ ಮಾತುಗಳು ಕೇಳಿಬಂದಿವೆ.

ಖಾಸಗಿ ಹೋಟೇಲ್‌ನಲ್ಲಿ ಬಿಜೆಪಿ ಶಾಸಕರ ಸಭೆಯನ್ನು ಮುಖ್ಯಮಂತ್ರಿ ಯಡಿಯೂರಪ್ಪ ಅವರು, ಸೋಮವಾರ ಕರೆದಿದ್ದು, ಸಭೆಗೆ ಯಡಿಯೂರಪ್ಪ ಅವರೊಂದಿಗೆ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ಸಹ ಭಾಗವಹಿಸಿದ್ದರು. ಈ ವೇಳೆ ಜಿಲ್ಲೆಗಳಲ್ಲಿ ಉಸ್ತುವಾರಿ ಸಚಿವರಿಂದ ನಿರ್ಲಕ್ಷ್ಯ, ಆಮೆಗತಿಯ ಕಾಮಗಾರಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಬಳಿ ದೂರು ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಪ್ರತಿಪಕ್ಷಗಳ ಶಾಸಕರೊಂದಿಗೆ ಹೊಂದಾಣಿಕೆ:** ಶಾಸಕರ ಸಮಾಲೋಚನಾ ಸಭೆಯಲ್ಲಿ, ಕೆಲ ಸಚಿವರ ಕಾರ್ಯವೈಖರಿ ವಿರುದ್ಧ ಶಾಸಕರು ಬಹಿರಂಗವಾಗಿಯೇ ದೂರು ನೀಡಿದ್ದಾರೆ. ಆರಂಭದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಶಾಸಕರ ಸಭೆಯನ್ನು ಕರೆಯಲಾಗಿತ್ತು. ಕೆಲವು ಸಚಿವರು ತಮ್ಮನ್ನು ಕಡೆಗಣಿಸುತ್ತಿದ್ದು, ಪ್ರತಿಪಕ್ಷಗಳ ಶಾಸಕರೊಂದಿಗೆ ಹೊಂದಾಣಿಕೆ ರಾಜಕಾರಣ ಮಾಡಿಕೊಳ್ಳುತ್ತಿದ್ದಾರೆ ಎಂದು ದೂರಿದ್ದಾರೆ.



ಖಾಸಗಿ ಹೋಟೆಲ್‌ನಲ್ಲಿ ನಡೆದ ಬಿಜೆಪಿ ಶಾಸಕರ ಸಭೆಯಲ್ಲಿ ಶಾಸಕರೊಂದಿಗೆ ಸಿಎಂ ಯಡಿಯೂರಪ್ಪ ಹಾಗೂ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್.

ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಿಜೆಪಿಯ ಹಲವು ಶಾಸಕರಿದ್ದು, ಅವರು ದಕ್ಷಿಣ ಕರ್ನಾಟಕದ ಕಡೆ ಕೆಲ ಸಚಿವರು ಹೆಚ್ಚು ಗಮನಹರಿಸುವುದಿಲ್ಲ. ಇದಿಷ್ಟೇ ಅಲ್ಲದೇ, ಸಚಿವರು ಜಿಲ್ಲೆಗಳಿಗೆ ಭೇಟಿ ನೀಡುವುದನ್ನು ಸಹ ನಮ್ಮ ಗಮನಕ್ಕೆ ತರುವುದಿಲ್ಲ. ಕೆಡಿಪಿ ಸಭೆಗೆ ಕರೆಯುವುದೂ ಇಲ್ಲ, ಸಂಬಂಧಪಟ್ಟ ಅಧಿಕಾರಿಗಳು ಮಾಹಿತಿಯನ್ನೂ ನೀಡುವುದಿಲ್ಲ. ನಮ್ಮ ಪಕ್ಷದ ಶಾಸಕರಿಗಿಂತಲೂ ಕಾಂಗ್ರೆಸ್-ಜೆಡಿಎಸ್ ಶಾಸಕರೊಂದಿಗೆ ಹೊಂದಾಣಿಕೆ ರಾಜಕಾರಣ ಮಾಡಿ ನಮ್ಮನ್ನು ಕಡೆಗಣಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

**ಅನ್ಯ ಶಾಸಕರಿಗೆ ಮಾಹಿತಿ:** ಸಚಿವರ ಜಿಲ್ಲಾ ಪ್ರವಾಸ ನಮಗಿಂತಲೂ ಹೆಚ್ಚಾಗಿ ಅನ್ಯ ಪಕ್ಷಗಳ ಶಾಸಕರಿಗೆ ಎಲ್ಲಾ ಮಾಹಿತಿ ಇರುತ್ತದೆ. ನಮಗೆ ಯಾವ ಮಾಹಿತಿಯನ್ನು ನೀಡುವುದಿಲ್ಲ. ಕೆಲವರನ್ನು ಬಿಟ್ಟು ಬಹುತೇಕರು ನಮ್ಮನ್ನು ಮಲತಾಯಿಯಂತೆ ನೋಡಿಕೊಳ್ಳುತ್ತಿದ್ದಾರೆ ಎಂದಿದ್ದಾರೆ. ಸಚಿವರು ಜಿಲ್ಲಾ ಪ್ರವಾಸ ಬಂದ ಮೇಲೆ ಶಾಸಕರಿಗೆ ಕಡ್ಡಾಯವಾಗಿ ಮಾಹಿತಿ ನೀಡುವುದು ಶಿಷ್ಟಾಚಾರ. ಕೆಡಿಪಿ ಸಭೆಗೆ ನಮ್ಮನ್ನು ಆಹ್ವಾನಿಸದೇ ಯಾಕೆ ಕಡೆಗಣಿಸುತ್ತಿದ್ದಾರೆ ಎಂದು ತಿಳಿದಿಲ್ಲ. ನಮ್ಮ ಕ್ಷೇತ್ರಗಳ ಸಮಸ್ಯೆಯನ್ನು ನಾವು ಅಲ್ಲಿ ಪ್ರಸ್ತಾಪಿಸದೆ ಎಲ್ಲವನ್ನು ಮುಖ್ಯಮಂತ್ರಿ ಬಳಿ ಹೇಳಲು ಸಾಧ್ಯವೇ ಎಂದು ಸಭೆಯಲ್ಲಿ ಪ್ರಶ್ನಿಸಿದ್ದಾರೆ ಎಂದು ತಿಳಿದುಬಂದಿದೆ.

ಶಾಸಕರ ದೂರುಗಳನ್ನು ಸಹನೆಯಿಂದ ಆಲಿಸಿದ ಯಡಿಯೂರಪ್ಪ, ಇನ್ನು ಮುಂದೆ ಇಂತಹ ಪ್ರಮಾದಗಳು ಆಗದಂತೆ ನೋಡಿಕೊಳ್ಳುತ್ತೇನೆ. ಯಾವುದೇ ಸಚಿವರು ಜಿಲ್ಲೆಗಳಿಗೆ ಭೇಟಿ ನೀಡುವಾಗ ಕಡ್ಡಾಯವಾಗಿ ಮಾಹಿತಿ ಕೊಡಬೇಕು, ಕೆಡಿಪಿ ಸಭೆ ಸೇರಿದಂತೆ ಪ್ರತಿಯೊಂದು ಕಾರ್ಯಕ್ರಮಗಳಿಗೆ ಶಾಸಕರನ್ನು ಆಹ್ವಾನಿಸಬೇಕೆಂದು ಸೂಚಿಸಿದ್ದಾರೆ.

## ಕೆಲವು ಸಚಿವರಿಗೆ ನೀವೇ ಬುದ್ಧಿ ಹೇಳಿ

ಕೆಲವು ಸಚಿವರು ಜಿಲ್ಲೆಗಳಲ್ಲಿ ಅನ್ಯ ಪಕ್ಷಗಳೊಂದಿಗೆ ಹೊಂದಾಣಿಕೆ ರಾಜಕಾರಣ ಮಾಡಿಕೊಳ್ಳುತ್ತಿದ್ದಾರೆ. ಲೋಕಸಭೆ, ವಿಧಾನಸಭೆ ಚುನಾವಣೆಯಿಂದ ಹಿಡಿದು ಗ್ರಾಪಂ ಚುನಾವಣೆವರೆಗೂ ನಾವು ಎದುರಾಳಿಗಳಾಗೆ ಹೋರಾಟ ನಡೆಸುತ್ತೇವೆ. ಕೆಲವರು ತಮ್ಮ ಸ್ವಾರ್ಥಕ್ಕಾಗಿ ಅನ್ಯ ಪಕ್ಷಗಳ ನಡುವೆ ಹೊಂದಾಣಿಕೆ ಮಾಡಿಕೊಂಡಿದ್ದಾರೆ. ನಾವು ಎಲ್ಲ ಸಚಿವರ ಬಗ್ಗೆ ದೂರುತ್ತಿಲ್ಲ. ಕೆಲವರು ಮಾತ್ರ ಅದೇಕೋ ನಮ್ಮನ್ನು ಕಡೆಗಣಿಸುತ್ತಾರೆ. ಎರಡರಿಂದ ಮೂರು ಬಾರಿ ಗೆದ್ದು ಬಂದಿರುವ ನಮ್ಮನ್ನೇ ಈ ರೀತಿ ನೋಡಿದರೆ ಹೇಗೆ? ಕೆಲವು ಸಚಿವರಿಗೆ ನೀವೇ ಕರೆದು ಬುದ್ಧಿ ಹೇಳಬೇಕೆಂದು ಶಾಸಕರು ಮನವಿ ಮಾಡಿದ್ದಾರೆ.

## ಕೋರ್ ಕಮಿಟಿ ಸಭೆಯ ನಿರ್ಧಾರ

ಈ ರೀತಿ ಶಾಸಕರನ್ನು ಕರೆದು ಒಂದು ಸುತ್ತಿನ ಮಾತುಕತೆ ನಡೆಸುವಂತೆ ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ರಾಜ್ಯ ಬಿಜೆಪಿ ಉಸ್ತುವಾರಿ ಅರುಣ್‌ಸಿಂಗ್ ಸೂಚನೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಶಾಸಕರ ಸಭೆಯನ್ನು ಕರೆಯಲಾಗಿತ್ತು. ಈ ವೇಳೆ ಮುಖ್ಯಮಂತ್ರಿ ಹಾಗೂ ರಾಜ್ಯಾಧ್ಯಕ್ಷರೊಂದಿಗೆ ಕೆಲ ಶಾಸಕರು ಪ್ರತ್ಯೇಕ ಸಭೆ ನಡೆಸಿದ್ದಾರೆ.